ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 003

ಸಂಖ್ಯೆ : ಕ.ಶಾ.ಪ&ಮೌ.ನಿ.ಮಂ/ಪರೀಕ್ಷೆ/ಮಾ.ಉ.ಪ್ರ/2022-23 ದಿನಾಂಕ:25.03.2023

# ಸುತ್ತೋಲೆ

ವಿಷಯ : ಮಾರ್ಚ್ 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳ ಮಾದರಿ ಉತ್ತರಗಳನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 09.03.2023 ರಿಂದ 23.03.2023 ರವರೆಗೆ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ವಿಷಯವಾರು ಪ್ರಶ್ನೆಪತ್ರಿಕೆಗಳ ಮಾದರಿ ಉತ್ತರ (Scheme of Evaluation) ಗಳನ್ನು ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ದಿನಾಂಕ: 25.03.2023 ರಿಂದ ದಿನಾಂಕ:29.03.2023 ರವರೆಗೆ ನಡೆಯಲಿರುವ ಪ್ರಶ್ನೆಪತ್ರಿಕೆಗಳ ಮಾದರಿ ಉತ್ತರಗಳನ್ನು ನಂತರ ಪ್ರಕಟಿಸಲಾಗುವುದು. ಇದಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು/ಪೋಷಕರುಗಳಿಂದ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಆನ್‌ಲೈನ್ ಮೂಲಕ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ:25.03.2023 ರಿಂದ 27.03.2023ರ ಸಂಜೆ 5.00 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ.

**ದಿನಾಂಕ:27.03.2023ರ ಸಂಜೆ 5.00 ಗಂಟೆಯ ನಂತರ ಸಲ್ಲಿಸಲಾದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.**

**ಈ ಕೆಳಗಿನ ಲಿಂಕ್ ಬಳಸಿ ಅಥವಾ ಇ-ಮೇಲ್ ವಿಳಾಸಕ್ಕೆ ಆಕ್ಷೇಪಣೆಗಳನ್ನು ಸಲ್ಲಿಸುವುದು.**

**1)ಮಂಡಲಿಯ ವೆಬ್‌ಸೈಟ್ ವಿಳಾಸ** : https://kseab.karnataka.gov.in/ → Latest News→ Click here for filing objections for II PUC Annual Examination March 2023 Scheme of Evaluation.

2.ಇ-ಮೇಲ್ ವಿಳಾಸ: jdexam.kseab@gmail.com

(ಸಹಿ) 25/3/2023

ನಿರ್ದೇಶಕರು (ಪರೀಕ್ಷೆಗಳು)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಜಿಲ್ಲಾ ಉಪನಿರ್ದೇಶಕರುಗಳ ಮೂಲಕ.
3. ಹೆಚ್ಚುವರಿ/ಕಛೇರಿ ಪ್ರತಿ.